**ಕರ್ನಾಟಕ ಸರ್ಕಾರ**

**1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ತರೀಕೆರೆ.**

**ಸಿ.ಸಿ.ನಂ.50/2025**

ಪಿ.ಡಬ್ಲ್ಯೂ: 3

ಸಿ.ಡಬ್ಲ್ಯೂ: 3

| | |
|---|---|
| ಸಾಕ್ಷಿದಾರರ ಹೆಸರು | : ಸಿದ್ದೇಶ್ |
| ತಂದೆ ಹೆಸರು: | :ಸಿ ಆರ್ ಗಂಗಾಧರಪ್ಪ |
| ವಯಸ್ಸು | : **45 ವರ್ಷ** |
| ಉದ್ಯೋಗ | : ವ್ಯವಾಸಾಯ |
| ವಾಸಸ್ಥಳ | : ಲಿಂಗದಹಳ್ಳಿ |

**ದಿನಾಂಕ: 16-02-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು**

**ಮುಖ್ಯ ವಿಚಾರಣೆ :** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ಈಗ್ಗೆ ಸುಮಾರು ಒಂದೂವರೆ ವರ್ಷಗಳ ಹಿಂದೆ ಲಿಂಗದಹಳ್ಳಿ ಪೊಲೀಸ್ ಠಾಣೆಯಲ್ಲಿ ಪೊಲೀಸರು ಅಪಘಾತದ ವಿಚಾರವಾಗಿ ಪೊಲೀಸರು ಸ್ಥಳ ಮಹಜರ್ ಕ್ರಮವನ್ನು ಜರುಗಿಸಿದ್ದು, ಅದಕ್ಕೆ ನಾನು ಸಹಿ ಮಾಡಿರುತ್ತೇನೆ. ಅಪಘಾತದ ವಿಚಾರವಾಗಿ ಪೊಲೀಸ್ ಠಾಣಾ ಆವರಣದಲ್ಲಿ ಅಮಾನತ್ತು ಮಹಜರ್ ಕ್ರಮವನ್ನು ಜರುಗಿಸಿದ್ದು, ಸದರಿ ಮಹಜರ್ ಗೆ ನಾನು ಸಹಿ ಮಾಡಿರುತ್ತೇನೆ. ನನ್ನ ಸಮಕ್ಷಮ ಪೊಲೀಸರು ಯಾವುದೇ ವಸ್ತುವನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ.

ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ಸ್ಥಳ ಮಹಜರ್ ಆಗಿದ್ದು, ಸದರಿ ದಾಖಲೆಯನ್ನು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-2(ಸಿ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ಮತ್ತೊಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ಅಮಾನತ್ತು ಮಹಜರ್ ಆಗಿದ್ದು, ಸದರಿ ದಾಖಲೆಯನ್ನು ಈಗಾಗಲೇ ನಿಪಿ-3 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-3(ಸಿ) ಎಂದು ಗುರುತಿಸಲಾಯಿತು.

ಸಾಕ್ಷಿಯು ನಿಪಿ4 ಮತ್ತು 5 ರಲ್ಲಿ ತಮ್ಮ ಇರುವಿಕೆಯನ್ನು ನೋಡಿ ಗುರುತಿಸಿರುತ್ತಾರೆ.

**(ಈ ಹಂತದಲ್ಲಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.)**

**ಪಾಟೀ ಸವಾಲುಃ** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ದಿನಾಂಕಃ **09-11-2024** ರಂದು ಲಿಂಗದಹಳ್ಳಿ ಪೊಲೀಸ್ ಠಾಣಾ ಆವರಣದಲ್ಲಿ ಸಂಜೆ **5-15** ರಿಂದ **6-00** ಗಂಟೆಯವರೆಗೆ ಅಪಘಾತಪಡಿಸಿದ ಕೆಎ **66** ಜೆ **5728** ನೋಂದಣಿ ಸಂಖ್ಯೆಯ ಟಿವಿ ಎಸ್ ನೇರಳೇ ಬಣ್ಣದ ಬೈಕನ್ನು ಪೊಲೀಸರು ಅಮನತ್ತುಪಡಿಸಿಕೊಂಡಿದ್ದು ಆಗ ಮಾಡಿದ ಮಹಜರ್ ಗೆ ನಾನು ಸಹಿ ಮಾಡಿರುತ್ತೇನೆ, ಅದರಲ್ಲಿ ಬರೆದಿರುವ ವಿಚಾರ ನನಗೆ ತಿಳಿದಿರುತ್ತದೆ.

**ಪಾಟೀ ಸವಾಲು ಃ ಆರೋಪಿ ಪರ** ಶ್ರೀ ಹೆಚ್ ಸಿ ಎಸ್ **ವಕೀಲರಿಂದ.**

ಮಹಜರ್ ನಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿರುವುದಿಲ್ಲ. ಪೊಲೀಸರ ಕೋರಿಕೆಯ ಮೇರೆಗೆ ಸಹಿ ಮಾಡಿರುತ್ತೇನೆ. ಅಪಘಾತವಾದ ಸ್ಥಳವನ್ನು ಪೊಲೀಸರು ತೋರಿಸಿರುತ್ತಾರೆ. ನಿಮಗೆ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲದಿದ್ದರೂ ಸಹ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೀರಾ ಎಂದರೆ ಸರಿಯಲ್ಲ.

**ಮರುವಿಚಾರಣೆಃ** ಇರುವುದಿಲ್ಲ.

**(ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)**

**ಓ. ಕೇ. ಸ. ಇ. ಎ. ಒ.**

ಸಹಿ/-

1ನೇ **ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**

**ಪ್ರ.ದ.ನ್ಯಾ.ದಂ.ರವರು,ತರೀಕೆರೆ.**